# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916
(ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)
(ಎನ್‌ಐಆರ್‌ಎಫ್-2022: ವಿಶ್ವವಿದ್ಯಾನಿಲಯ ವರ್ಗದಲ್ಲಿ 33ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 54ನೇ ಸ್ಥಾನವನ್ನು ಹೊಂದಿದೆ)

ಸಂಖ್ಯೆ:ಪ.ವಿ.8.6/07(2)/2015-16

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570 005
ದಿನಾಂಕ: 05-06-2023

## ಸುತ್ತೋಲೆ

ವಿಷಯ: ಪರೀಕ್ಷಾ ಶುಲ್ಕಗಳನ್ನು ಪಾವತಿಸುವ ಬಗೆಗೆ.

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಜುಲೈ/ಆಗಸ್ಟ್-2023ರ ಸ್ನಾತಕ ಪದವಿ ಪರೀಕ್ಷೆಗಳ ಸಂಬಂಧ ಪರೀಕ್ಷಾ ಅಧಿಸೂಚನೆಯನ್ನು ಹೊರಡಿಸಿ ಪರೀಕ್ಷಾ ಶುಲ್ಕಗಳ ಪಾವತಿಗೆ ಅಂತಿಮ ದಿನಾಂಕ 17.06.2023 ಎಂದು ನಿಗದಿಪಡಿಸಲಾಗಿದೆ. ಹಾಗಾಗಿ, ನಿಗದಿಗೊಳಿಸಿದ ದಿನಾಂಕದೊಳಗೆ ಕಾಲೇಜಿನಲ್ಲಿ ಪರೀಕ್ಷಾ ಶುಲ್ಕಗಳನ್ನು ವಿದ್ಯಾರ್ಥಿಗಳಿಂದ ಪಾವತಿಸಿಕೊಳ್ಳುವುದು.

ಮುಂದುವರೆದು, ಪರೀಕ್ಷಾ ಶುಲ್ಕ ಪಾವತಿಸಿಲ್ಲವೆಂದು, ಈಗ ಪಾವತಿಸಲು ಮತ್ತು ಪರೀಕ್ಷೆ ಬರೆಯಲು ಅವಕಾಶ ನೀಡಬೇಕೆಂದು ಕೋರಿ ಕಳೆದ ಒಂದು ವರ್ಷದಿಂದ ದಿನಕ್ಕೆ ಸುಮಾರು 100-200 ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯಕ್ಕೆ ಬರುತ್ತಿದ್ದಾರೆ. ಈ ಬಾರಿಯಿಂದ ಇದಕ್ಕೆ ಅವಕಾಶ ನೀಡದ ರೀತಿ ಎಚ್ಚರಿಕೆ ವಹಿಸಿ ಪ್ರತಿ ವಿದ್ಯಾರ್ಥಿಗಳ ಗಮನಕ್ಕೆ ತಂದು ನಿಗದಿತ ದಿನಾಂಕದೊಳಗೆ ಪರೀಕ್ಷಾ ಶುಲ್ಕ ಪಾವತಿಸಲು ಪ್ರತಿ ವಿದ್ಯಾರ್ಥಿಗಳ ಗಮನಕ್ಕೆ ಕಡ್ಡಾಯವಾಗಿ ತರತಕ್ಕದ್ದು.

6.6.2023
ಕುಲಸಚಿವ (ಪರೀಕ್ಷಾಂಗ)

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಮೈಸೂರು, ಮಂಡ್ಯ ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು/ನಿರ್ದೇಶಕರು/ಡೀನರು, ವಾಕ್ ಮತ್ತು ಶ್ರವಣ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು/ಜೆ.ಎಸ್.ಎಸ್. ಕಾಲೇಜು ವಾಕ್ ಮತ್ತು ಶ್ರವಣ ಸಂಸ್ಥೆ, ಎಂ.ಜಿ.ರಸ್ತೆ, ಚಾಮರಾಜೇಂದ್ರ ದೃಶ್ಯ ಕಲಾ ಅಕಾಡೆಮಿ (ಕಾವ) ಸಿದ್ದಾರ್ಥನಗರ, ಮೈಸೂರು.
2. ಮಾನ್ಯ ಕುಲಪತಿಗಳ/ಕುಲಸಚಿವರ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿ ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಕಛೇರಿ ಪ್ರತಿ.